ಶ್ರೀ ಆರ್.ವಿ. ದೇಶಪಾಂಡೆ (ಮಾನ್ಯ ಉನ್ನತ ಶಿಕ್ಷಣ ಸಚಿವರು)

ಅ) ಬಂದಿದೆ.

ಆ) ವಿದ್ಯಾರ್ಥಿಗಳ ಸಂಖ್ಯೆ, ಜಮೀನಿನ ಲಭ್ಯತೆ ಹಾಗೂ ಅನುದಾನದ ಲಭ್ಯತೆ, ಎಐಸಿಟಿಇ ನಿಯಮಗಳನ್ನು ಆಧರಿಸಿ ಪಾಲಿಟೆಕ್ನಿಕ್ ಕಾಲೇಜುಗಳನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದು.

ಇ) ಮೇಲಿನಂತೆ.

ಶೌಚಾಲಯಗಳ ವ್ಯವಸ್ಥೆ

1454(1968); ಶ್ರೀ ಕ್ಯಾತಸಂದ್ರ ಎನ್. ರಾಜಣ್ಣ

ಅ) ಮಧುಗಿರಿ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಪದವಿ ಪೂರ್ವ ಕಾಲೇಜು ಹಾಗೂ ಪ್ರೌಢಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ಶೌಚಾಲಯ ವ್ಯವಸ್ಥೆ ಇಲ್ಲದಿರುವುದು. ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಶೌಚಾಲಯ ವ್ಯವಸ್ಥೆ ಇಲ್ಲದ ಪ್ರೌಢಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳು ಯಾವುವು; ಶೌಚಾಲಯಗಳ ನಿರ್ಮಾಣಕ್ಕೆ ಅನುದಾನ ಬಿಡುಗಡೆ ಮಾಡಲಾಗಿದೆಯೇ; ಹಾಗಿದ್ದಲ್ಲಿ ಯಾವ ಶಾಲೆ/ ಕಾಲೇಜುಗಳಿಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ;

ಇ) ಶೌಚಾಲಯಗಳ ನಿರ್ಮಾಣಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಯಾವ ಕಾಲಮಿತಿಯೊಳಗೆ ಶೌಚಾಲಯಗಳನ್ನು ನಿರ್ಮಾಣ ಮಾಡಲಾಗುವುದು?

ಶ್ರೀ ಕಿಮ್ಮನೆ ರತ್ನ ಕರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಬಂದಿದೆ

ಆ) ಪದವಿ ಪೂರ್ವ ಶಿಕ್ಷಣ ಇಲಾಖೆ:

ಮಧುಗಿರಿ ಕ್ಷೇತ್ರ ವ್ಯಾಪ್ತಿಯಲ್ಲಿ ಒಟ್ಟು 06 ಸ.ಪ.ಪೂ.ಕಾಲೇಜುಗಳು ಕಾರ್ಯನಿರ್ವಹಿಸುತ್ತಿದ್ದು, 04 ಸ.ಪ.ಪೂ. ಕಾಲೇಜುಗಳಿಗೆ ಶೌಚಾಲಯ ವ್ಯವಸ್ಥೆ ಇರುತ್ತದೆ. ಸ.ಪ.ಪೂ.ಕಾಲೇಜು ಹೊಸಕೆರೆ ಮತ್ತು ಐ.ಡಿ.ಹಳ್ಳಿ ಕಾಲೇಜುಗಳಿಗೆ ಸ್ವಂತ ಶೌಚಾಲಯ ವ್ಯವಸ್ಥೆ ಇರುವುದಿಲ್ಲ. ಸ್ಥಳೀಯವಾಗಿ ಲಭ್ಯವಿರುವ ಹಿ.ಪ್ರಾ.ಶಾಲೆ, ಮತ್ತು ಪ್ರೌಢಶಾಲೆಯ ಶೌಚಾಲಯ ವ್ಯವಸ್ಥೆಯನ್ನೇ ಉಪಯೋಗಿಸಿಕೊಳ್ಳುತ್ತಿದ್ದಾರೆ.

ಪ್ರೌಢಶಾಲೆ

ಸರ್ಕಾರಿ ಪ್ರೌಢಶಾಲೆಗಳಲ್ಲಿ ಶೌಚಾಲಯ ಇಲ್ಲದಿರುವ ಶಾಲೆಗಳು ಯಾವುದೂ ಇರುವುದಿಲ್ಲ. 2013–14ನೇ ಸಾಲಿನಲ್ಲಿ ಶೌಚಾಲಯ ನಿರ್ಮಾಣಕ್ಕೆ ಯಾವುದೇ ಹಣ ಬಿಡುಗಡೆಯಾಗಿರುವುದಿಲ್ಲ. ಆದರೆ ಶೌಚಾಲಯ ಮತ್ತು ಕುಡಿಯುವ ನೀರಿನ ನಿರ್ವಹಣೆಗೆ ರಾಜ್ಯ ಅನುದಾನದಿಂದ ತಾಲ್ಲೂಕುವಾರು ಈ ಕೆಳಕಂಡಂತೆ ಅನುದಾನ ಬಿಡುಗಡೆಯಾಗಿರುತ್ತದೆ.

ಕ್ರ.ಸಂ	ತಾಲ್ಲೂಕು	ಬಿಡುಗಡೆ ಮಾಡಿರುವ ಅನುದಾನ
1	ಕೊರಟಗೆರೆ	3,35,330.00
2	ಮಧುಗಿರಿ	4,85,860.00
3	ಪಾವಗಡ	3,56,860.00
4	ಸಿರಾ	5,68,330.00
	ಒಟ್ಟು	**17,46,380.00**

ಇ) ವಿದ್ಯಾರ್ಥಿಗಳ ಸಂಖ್ಯೆ ಆಧರಿಸಿ ಶೌಚಾಲಯ ಒದಗಿಸಲು ಅನುದಾನದ ಲಭ್ಯತೆಯನ್ನಾಧರಿಸಿ ಪದವಿ ಪೂರ್ವ ಕಾಲೇಜುಗಳಲ್ಲಿ ಶೌಚಾಲಯಗಳನ್ನು ನಿರ್ಮಾಣ ಮಾಡಲು ಹಾಗೂ ಪ್ರಾಥಮಿಕ/ಪ್ರೌಢಶಾಲೆಗಳಿಗೆ ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ

ಅಭಿಯಾನ ಅಡಿಯಲ್ಲಿ ಅನುದಾನದ ಲಭ್ಯತೆಯನ್ನಾಧರಿಸಿ, ಹಂತ ಹಂತವಾಗಿ ಶೌಚಾಲಯಗಳನ್ನು ನಿರ್ಮಾಣ ಮಾಡಲು ಕ್ರಮ ಕೈಗೊಳ್ಳಲಾಗುವುದು

ಕುಡಿಯುವ ನೀರಿನಲ್ಲಿ ಫ್ಲೋರೈಡ್ ಅಂಶ

1455(1969); ಶ್ರೀ ಕ್ಯಾತಸಂದ್ರ ಎನ್.ರಾಜಣ್ಣ (ಮಧುಗಿರಿ)

ಅ) ಮಧುಗಿರಿ ತಾಲ್ಲೂಕಿನ ಗ್ರಾಮಗಳಲ್ಲಿ ಕುಡಿಯುವ ನೀರಿನಲ್ಲಿ ಫ್ಲೋರೈಡ್ ಅಂಶ ಜಾಸ್ತಿ ಇರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಇಂತಹ ಗ್ರಾಮಗಳ ಸಂಖ್ಯೆ ಎಷ್ಟು (ವಿವರ ನೀಡುವುದು);

ಆ) ಫ್ಲೋರೈಡ್ ಅಂಶಯುಕ್ತ ನೀರನ್ನು ಉಪಯೋಗಿಸಿದ್ದರಿಂದ ಸ್ಥಳೀಯ ಜನರು ಅನಾರೋಗ್ಯದಿಂದ ಬಳಲುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಶುದ್ಧ ಕುಡಿಯುವ ನೀರು ಪೂರೈಕೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು (ವಿವರ ನೀಡುವುದು)?

ಶ್ರೀ ಹೆಚ್.ಕೆ. ಪಾಟೀಲ್ (ಗ್ರಾ. ಮತ್ತು ಪಂ. ರಾಜ್ ಸಚಿವರು)

ಅ) ಬಂದಿದೆ.

43 ಗ್ರಾಮಗಳ ವಿವರಗಳನ್ನು ಅನುಬಂಧ–1ರಲ್ಲಿ ನೀಡಿದೆ.

ಆ) ಬಂದಿದೆ.

ಇ) ಪರ್ಯಾಯ ಸುರಕ್ಷಿತ ಜಲಮೂಲವಿಲ್ಲದಿರುವ ಮತ್ತು ತೀವ್ರ ಕುಡಿಯುವ ನೀರಿನ ಗುಣಮಟ್ಟದ ಸಮಸ್ಯೆಯಿರುವಡೆ ಶುದ್ಧ ಕುಡಿಯುವ ನೀರು ಪೂರೈಕೆಗಾಗಿ ಪ್ರಸಕ್ತ ಸಾಲಿನಲ್ಲಿ 27 ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಅಳವಡಿಸಲು ಕ್ರಮ ಕೈಗೊಂಡಿದೆ. ಉಳಿದ 16 ಜನವಸತಿಗಳಿಗೆ ಪರ್ಯಾಯ ಸುರಕ್ಷಿತ ಜಲಮೂಲ ಒದಗಿಸಿ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲು ಜಿಲ್ಲಾ ಪಂಚಾಯಿತಿ ಕ್ರಮವಹಿಸಿದೆ. ವಿವರಗಳನ್ನು ಅನುಬಂಧ–2ರಲ್ಲಿ ನೀಡಿದೆ.